ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಭೂ ಸುಧಾರಣೆ ಕಾಯ್ದೆ ತಿದ್ದುಪಡಿ ಮಾಡುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-

266 (406) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರವು ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ಹಲವು ಸೆಕ್ಷನ್‌ಗಳನ್ನು ತೆಗೆದು ಹಾಕಲು ನಿರ್ಧರಿಸಿರುವುದು ನಿಜವೇ ; ಸದರಿ ಸೆಕ್ಷನ್‌ಗಳು ಯಾವುವು ; ಅವುಗಳಲ್ಲಿರುವ ಷರತ್ತುಗಳೇನು ; ಅವುಗಳನ್ನು ತೆಗೆದು ಹಾಕಲು ಇರುವ ಕಾರಣಗಳೇನು ;

(ಆ) ಈ ಸೆಕ್ಷನ್‌ಗಳನ್ನು ತೆಗೆದು ಹಾಕುವುದರಿಂದ ರಾಜ್ಯದ ರೈತರಿಗೆ ಹಾಗೂ ಈ ಕಾಯಿದೆ ಜಾರಿಗೆ ತಂದ ದೇವರಾಜು ಅರಸುರವರಿಗೆ ಸರ್ಕಾರ ಅಪಮಾನ ಮಾಡಿದಂತಾಗುವುದಿಲ್ಲವೇ ; (ವಿವರವಾದ ಮಾಹಿತಿ ನೀಡುವುದು)

(ಇ) ಭೂ ಸುಧಾರಣಾ ಕಾಯ್ದೆಯ ಈ ಸೆಕ್ಷನ್‌ಗಳನ್ನು ಸರ್ಕಾರವು ತೆಗೆದು ಹಾಕುವುದರಿಂದ ಭವಿಷ್ಯದಲ್ಲಿ ರೈತರು ತಮ್ಮ ಭೂಮಿಗಳನ್ನು ಹಣ ಉಳ್ಳವರಿಗೆ ಬಿಕರಿ ಮಾಡಿ ಹಾಳಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಸರ್ಕಾರ ಈ ಸಂಬಂಧ ಯಾವ ಕ್ರಮ ಕೈಗೊಳ್ಳಲಿದೆ?